## ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯಃ- ಬೀದರ್ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ-1) ಗೆ ಸರ್ಕಾರದ **ಅಂತಿಮ ಅನುಮೋದನೆ** ನೀಡುವ ಬಗ್ಗೆ

ಓದಲಾಗಿದೆ:-1)ಸರ್ಕಾರದ ಆದೇಶ ಸಂಖ್ಯೆ:ನಅಇ:200:ಗುಅಪ್ರಾ:2010, ದಿನಾಂಕ:01-12-2010

2) ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ: ಬೀನಪ್ರಾ:ಟಿ.ಪಿ.ಎಂ.ಮ.ಯೋ(ಪ1):2011-12/169, ದಿನಾಂಕ: 06-02-2014.

3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ:ನಗ್ರಾಯೋ(1):ಗುವಿ:ಬೀದರ್:ಮ.ಯೋ(ಪ1):ಅಂತಿಮ:2013-14 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ: 12-02-2014.

277
22/2/14

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಬೀದರ್ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ-1)ಗೆ ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರವು ಬೀದರ್ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ(ಪ-1) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆ(ಪ-1)ಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದೆ.

ಮೇಲೆ ಓದಲಾದ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ ಬೀದರ್ ನಗರದ ಜನಸಂಖ್ಯೆಯು 2021ರಲ್ಲಿ 5,00,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಬೀದರ್ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 4928.88 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾ ಯೋಜನೆ(ಪ-1)ಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ 4928.88 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 2246.98 ಹೆಕ್ಟೇರ್ (ಶೇ.45.58), ವಾಣಿಜ್ಯಕ್ಕಾಗಿ 224.97 ಹೆಕ್ಟೇರ್ (ಶೇ.4.56), ಕೈಗಾರಿಕೆಗಾಗಿ 334.71 ಹೆಕ್ಟೇರ್, (ಶೇ.6.80), ಸಾರ್ವಜನಿಕಃಅರೆ ಸಾರ್ವಜನಿಕ ಉಪಯೋಗಕ್ಕೆ 421.28 ಹೆಕ್ಟೇರ್, (ಶೇ.8.55) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 482.26 ಹೆಕ್ಟೇರ್ (ಶೇ.9.78) ಹಾಗೂ ಸಾರಿಗೆ/ ಸಂಪರ್ಕ ವಲಯಕ್ಕೆ 1054.46 ಹೆಕ್ಟೇರ್ (ಶೇಕಡ 21.39), ನಾಗರೀಕ ಸೌಲಭ್ಯಕ್ಕಾಗಿ 32.21 ಹೆಕ್ಟೇರ್ (ಶೇ.0.66), ಸಂರಕ್ಷಿತ ಪ್ರದೇಶ 132.01 ಹೆಕ್ಟೇರ್ (ಶೇ.2.68), ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ಸೂಕ್ತವಾಗಿ ಮಾರ್ಪಡಿಸಿ ರೂಪಿಸಲಾಗಿದ್ದು, ಸದರಿ ಮಹಾ ಯೋಜನೆ(ಪ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ

...2

ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ 147 ಗುಅಪ್ರಾ 2013 ದಿನಾಂಕ:21.02.2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೀದರ್ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ(ಪ-1)ಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಿದೆ. ಮಹಾ ಯೋಜನೆ(ಪ-1)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತುಗಳು:1. ಮಹಾಯೋಜನೆ ಹೊರಡಿಸುವ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

2.ಮಹಾಯೋಜನೆಯಲ್ಲಿ ಗುರುತಿಸಲಾಗಿರುವ ಸರ್ವೇ ನಂಬರುಗಳು, ನಾಲೆ/ಅತಿ ಹೆಚ್ಚು ವಿದ್ಯುತ್ ವಾಹಕ ತಂತಿಗಳು/ಹಾಲಿ ರಸ್ತೆ/ಕೆರೆ ಕೊಳಗಳಲ್ಲಿ ಯಾವುದಾದರು ತಪ್ಪಿದ್ದಲ್ಲಿ ಅಂತಹ ತಪ್ಪುಗಳನ್ನು ಸೂಕ್ತ ದಾಖಲೆಗಳೊಂದಿಗೆ ಸ್ಥಳ ಪರಿಶೀಲಿಸಿ, ದೃಡಪಡಿಸಿಕೊಂಡು ವಾಸ್ತವಾಂಶಗಳನ್ನು ಗಣನೆಗೆ ತೆಗೆದುಕೊಂಡು ಪ್ರಾಧಿಕಾರವು ಸರಿಪಡಿಸಿಕೊಳ್ಳತಕ್ಕದ್ದು.

3.ಮಹಾಯೋಜನೆಯಲ್ಲಿ ಗುರುತಿಸಿರುವ ಅಧಿಕ ವಿದ್ಯುತ್ ವಾಹಕ ತಂತಿ, ರಸ್ತೆ, ನಾಲೆಯ ಪಂಕ್ತೀಕರಣದಲ್ಲಿ ಹಾಗೂ ಭೂಮಿಯ ಮೇಲೆ ಹಾಲಿ ಇರುವ ಪಂಕ್ತೀಕರಣದಲ್ಲಿ ವ್ಯತ್ಯಾಸವಿದ್ದಲ್ಲಿ, ಮಹಾಯೋಜನೆಯಲ್ಲಿ, ಹಾಲಿ ಇರುವ ಪಂಕ್ತೀಕರಣದನ್ವಯ ಗುರುತಿಸಿದ ನಂತರ ಉಳಿಯುವ ಜಾಗವನ್ನು ಜಮೀನಿಗೆ ಹೊಂದಿಕೊಂಡಿರುವ ಭೂ ಉಪಯೋಗವನ್ನು ನಿಗಧಿಪಡಿಸಬಹುದು.

4.ಹಾಲಿ ರಸ್ತೆಯ ಪಂಕ್ತೀಕರಣವನ್ನು ಮಹಾಯೋಜನೆಯಲ್ಲಿ ತಪ್ಪಾಗಿ ಗುರುತಿಸಿದಂತಹ ಪ್ರಕರಣಗಳಲ್ಲಿ, ಸೂಕ್ತ ದಾಖಲೆಗಳೊಂದಿಗೆ (Cadestial Map) ಹಾಲಿ ಭೂಮಿಯಲ್ಲಿರುವ ರಸ್ತೆ ಪಂಕ್ತೀಕರಣವನ್ನು ರಸ್ತೆ ಅಲೀಕರಣ ಮಾಡುವಾಗ ಪರಿಗಣನೆಗೆ ತೆಗೆದುಕೊಳ್ಳತಕ್ಕದ್ದು. ಹಾಗೂ ಮಹಾಯೋಜನೆಯಲ್ಲಿ ಹಾಲಿ ರಸ್ತೆಯನ್ವಯ ಪಂಕ್ತೀಕರಣ ಅಳವಡಿಸಿಕೊಂಡ ನಂತರ ಉಳಿಯುವ ಜಾಗವನ್ನು ಜಮೀನಿಗೆ ಹೊಂದಿಕೊಂಡಿರುವ ಭೂ ಉಪಯೋಗ (Higher land use) ನಿಗಧಿಪಡಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ಎಂ.ವಾಸುದೇವ ರಾವ್)
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವಂತೆ ಮತ್ತು ಪ್ರಕಟಿತ 50 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

...3

<u>ಪ್ರತಿಯನ್ನು:</u>

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.

2) ಜಿಲ್ಲಾಧಿಕಾರಿಗಳು, ಬೀದರ ಜಿಲ್ಲೆ, ಬೀದರ

3) ಆಯುಕ್ತರು, ಬೀದರ ನಗರಾಭಿವೃದ್ಧಿ ಪ್ರಾಧಿಕಾರ, ಬೀದರ

4) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಬೀದರ್

6) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.